**All India Radio: Bangalore**
**Regional Bulletin In Kannada**
**04.11.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**04.11.2025 / 6.40 p.m.**
*******************

**ಮುಖ್ಯಾಂಶಗಳು**

1. **ಬೆಂಗಳೂರು ಕೌಶಲ್ಯ ಶೃಂಗಸಭೆ 2025ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ**
2. **ರಾಜ್ಯದ ಸ್ವ-ಸಹಾಯ ಗುಂಪು, ಸಣ್ಣ ಉದ್ಯಮಕ್ಕೆ ವಾಲ್‌ಮಾರ್ಟ್ ಬಲ – ಒಪ್ಪಂದಕ್ಕೆ ಸಹಿ ಹಾಕಿದ ಸರ್ಕಾರ**
3. **ಬೆಳಗಾವಿಯಲ್ಲಿ ಕಬ್ಬು ಬೆಳೆಗಾರರ ಪ್ರತಿಭಟನೆ ; ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಬೆಂಬಲ**
4. **ಬೆಂಗಳೂರಿನಲ್ಲಿ ಮಹಿಳೆ ಮೇಲೆ ಪೊಲೀಸರಿಂದ ಹಲ್ಲೆ ಪ್ರಕರಣ ; ವರದಿ ನೀಡುವಂತೆ ಗೃಹ ಸಚಿವ ಪರಮೇಶ್ವರ್ ಸೂಚನೆ**
5. **ನಾಳೆ ಬಾಗಲಕೋಟೆಯ ತಿಮ್ಮಾಪುರದಲ್ಲಿ ಮಾಜಿ ಸಚಿವ ಹೆಚ್.ವೈ. ಮೇಟಿ ಅಂತ್ಯಕ್ರಿಯೆ**

***************

ಬೆಂಗಳೂರು ಕೌಶಲ್ಯ ಶೃಂಗಸಭೆ – 2025 ಕ್ಕೆ ಚಾಲನೆ ದೊರೆತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕೌಶಲ್ಯ ಶೃಂಗಸಭೆಗೆ ಚಾಲನೆ ನೀಡಿದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಡಾ. ಶರಣಪ್ರಕಾಶ್ ಪಾಟೀಲ್, ಪ್ರಿಯಾಂಕ್ ಖರ್ಗೆ, ಮಾರಿಷಸ್ ಸಚಿವ ಮೊಹಮ್ಮದ್ ರೆಜಾಖಾಸಂ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಈ ಶೃಂಗಸಭೆಯಲ್ಲಿ ನೂರಕ್ಕೂ ಹೆಚ್ಚು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಭಾಷಣಾಕಾರರು 50ಕ್ಕೂ ಹೆಚ್ಚು ಪ್ರದರ್ಶಕರು ಹಾಗೂ ಸಹಭಾಗಿದಾರರು ಸೇರಿ 3 ಸಾವಿರಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದಾರೆ.

***************

ರಾಜ್ಯದ ಸ್ವ–ಸಹಾಯ ಗುಂಪು ಹಾಗೂ ಸಣ್ಣ ಉದ್ಯಮಕ್ಕೆ ಇನ್ನು ಮುಂದೆ ವಾಲ್‌ಮಾರ್ಟ್ ಬಲ ನೀಡಲಿದೆ. ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಅಡಿಯಲ್ಲಿ ರಾಷ್ಟ್ರೀಯ ಜೀವನೋಪಾಯ ಮಿಷನ್ ಈಗ ಸ್ವ–ಸಹಾಯ ಗುಂಪುಗಳ ಡಿಜಿಟಲ್ ಸಾಮರ್ಥ್ಯ ಹೆಚ್ಚಿಸಲು ವಾಲ್‌ಮಾರ್ಟ್ ಜೊತೆ ಒಪ್ಪಂದ ಮಾಡಿಕೊಂಡಿದೆ.

ಒಪ್ಪಂದಕ್ಕೆ ಸಚಿವ ಶರಣಪ್ರಕಾಶ್ ಪಾಟೀಲ್ ಹಾಗೂ **ಎನ್.ಎಲ್.ಎಂ** ನಿರ್ದೇಶಕಿ ಆರ್. ಸ್ನೇಹಲ್ ಮತ್ತು **ಐಟುಐ** ಫೌಂಡೇಶನ್ ಟ್ರಸ್ಟಿ ಪಾರೂಲ್ ಸೋನಿ ಸಹಿ ಹಾಕಿದ್ದಾರೆ.

ಬಳಿಕ ಮಾತನಾಡಿದ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಈ ಒಪ್ಪಂದದಿಂದ ಸ್ವ–ಸಹಾಯ ಗುಂಪುಗಳಿಗೆ ಹೆಚ್ಚಿನ ಅನುಕೂಲವಾಗಲಿದೆ. ಹೊಸ ಮಾರುಕಟ್ಟೆಗಳಿಗೂ ಅವಕಾಶ ದೊರೆಯಲಿದೆ ಎಂದು ತಿಳಿಸಿದ್ದಾರೆ. ವಾಲ್‌ಮಾರ್ಟ್ ವೃದ್ಧಿಯ ಬೆಂಬಲದೊಂದಿಗೆ ಉತ್ಪನ್ನಗಳನ್ನು ಜಾಗತಿಕ ಮಟ್ಟದಲ್ಲಿಯೂ ಪ್ರದರ್ಶಿಸಬಹುದು ಎಂದು ಸ್ಪಷ್ಟಪಡಿಸಿದ್ದಾರೆ.

ವಾಲ್‌ಮಾರ್ಟ್ ಹಿರಿಯ ಉಪಾಧ್ಯಾಕ್ಷ ಜೇಸನ್ ಪ್ರೇಮ್‌ಸ್ಟಾಡ್ ಮಾತನಾಡಿ, ಸ್ವ–ಸಹಾಯ ಗುಂಪುಗಳ ಉತ್ಪನ್ನಗಳನ್ನು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರದರ್ಶಿಸಲು ಅವಕಾಶ ದೊರೆಯಲಿದೆ ಎಂದು ತಿಳಿಸಿದ್ದಾರೆ.

ದೇಶೀಯ ಮತ್ತು ಅಂತಾರಾಷ್ಟ್ರೀಯ ಪ್ರಯಾಣಿಕರನ್ನು ಆಕರ್ಷಿಸಲು ಬೆಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವಿಶೇಷ ಸ್ವ–ಸಹಾಯ ಗುಂಪುಗಳ ಉತ್ಪನ್ನ ಕೇಂದ್ರಗಳನ್ನು ಸ್ಥಾಪಿಸಲಾಗುವುದು ಎಂದು ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಪ್ರಕಟಿಸಿದರು.

***************

ಪ್ರತಿಟನ್ ಕಬ್ಬಿಗೆ 3 ಸಾವಿರದ 500 ರೂಪಾಯಿ ನೀಡಬೇಕೆಂದು ಆಗ್ರಹಿಸಿ ಕಳೆದ ಒಂದು ವಾರದಿಂದ ಬೆಳಗಾವಿ ಜಿಲ್ಲೆಯ ಗುರ್ಲಾಪುರ ಕ್ರಾಸ್ ಬಳಿ ಕಳೆದ ಏಳು ದಿನಗಳಿಂದ ಕಬ್ಬು ಬೆಳೆಗಾರರು ಪ್ರತಿಭಟನೆ ನಡೆಸುತ್ತಿದ್ದಾರೆ.

ಸಕ್ಕರೆ ಕಾರ್ಖಾನೆಗಳು ರೈತರ ಬೇಡಿಕೆಗೆ ಸ್ಪಂದಿಸದ ಕಾರಣ ರಾಯಬಾಗ, ಗೋಕಾಕ, ಮೂಡಲಗಿ, ಅಥಣಿ, ಹುಕ್ಕೇರಿ, ಚಿಕ್ಕೋಡಿ ಭಾಗದಲ್ಲಿ ರೈತರು ಪ್ರತಿಭಟನೆ ನಡೆಸುತ್ತಿದ್ದು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಬೆಂಬಲ ಸೂಚಿಸಿದ್ದಾರೆ. ಕಬ್ಬು ಬೆಳೆಗಾರರ ಬೇಡಿಕೆಗಳು ಈಡೇರುವವರೆಗೂ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಈ ಮಧ್ಯೆ ಅಥಣಿ ಹಾಗೂ ಹುಕ್ಕೇರಿ ಪಟ್ಟಣಗಳಲ್ಲಿ ಇಂದು ಬಂದ್‌ಗೆ ಕರೆ ನೀಡಲಾಗಿತ್ತು. ವ್ಯಾಪಾರಸ್ಥರು ತಮ್ಮ ಅಂಗಡಿ ಮುಂಗಟ್ಟುಗಳನ್ನು ಮುಚ್ಚಿ ಬೆಂಬಲ ವ್ಯಕ್ತಪಡಿಸಿದ್ದಾರೆ. ಈ ಎರಡೂ ಪಟ್ಟಣಗಳಲ್ಲಿ ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಲಾಗಿತ್ತು. ಪ್ರತಿಭಟನಾ ನಿರತ ಕೆಲ ರೈತರು ಸಕ್ಕರೆ ಕಾರ್ಖಾನೆ ಕಚೇರಿಗಳ ಮೇಲೆ ಕಲ್ಲು ತೂರಾಟ ನಡೆಸಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಪ್ರತಿಕ್ರಿಯಿಸಿ, ಕಬ್ಬು ಬೆಳೆಗಾರರ ಸಮಸ್ಯೆ ನಿವಾರಣೆಗೆ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

***************

ಕಬ್ಬು ಬೆಳೆಯುವ ರೈತರಿಗೂ ಅನ್ಯಾಯ ಆಗಬಾರದು, ಕಾರ್ಖಾನೆ ಮಾಲೀಕರಿಗೂ ಅನ್ಯಾಯ ಆಗಬಾರದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ಇಂದು ಕಬ್ಬು ಬೆಳೆಗಾರರ ಪ್ರತಿಭಟನೆಯ ಹಿನ್ನೆಲೆಯಲ್ಲಿ ಪ್ರತಿಕ್ರಿಯಿಸಿರುವ ಅವರು, ಕಾರ್ಖಾನೆ ಮಾಲೀಕರು ಹಾಗೂ ರೈತರು ಸೇರಿ ಸಭೆ ನಡೆಸಲು ನಿರ್ಧರಿಸಲಾಗಿದೆ. ರೈತರಿಗೆ ಅನ್ಯಾಯವಾಗದ ರೀತಿಯಲ್ಲಿ ಕಾರ್ಖಾನೆ ಮಾಲೀಕರು ನಡೆದುಕೊಳ್ಳಬೇಕು ಎಂದು ಹೇಳಿದ್ದಾರೆ.

***************

ಮನೆ ಕೆಲಸದ ಮಹಿಳೆಯನ್ನು ಅಕ್ರಮ ಬಂಧನದಲ್ಲಿಟ್ಟು ವರ್ತೂರು ಠಾಣೆ ಪೊಲೀಸರು ಹಲ್ಲೆ ನಡೆಸಿರುವ ಆರೋಪಕ್ಕೆ ಸಂಬಂಧಿಸಿದಂತೆ ವರದಿ ನೀಡುವಂತೆ ಗೃಹ ಸಚಿವ ಡಾ. ಜಿ.ಪರಮೇಶ್ವರ್ ಬೆಂಗಳೂರು ನಗರ ಪೊಲೀಸ್ ಆಯುಕ್ತರಿಗೆ ಸೂಚಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವರದಿ ಬಂದ ಬಳಿಕ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಇದೇ ವೇಳೆ ದೆಹಲಿಗೆ ಯಾರು ಹೋಗುತ್ತಾರೆ ಎಂಬುದು ತಿಳಿದಿಲ್ಲ, ತಾವು ದೆಹಲಿಗೆ ಹೋಗುವ ಬಗ್ಗೆ ಯೋಚನೆ ಮಾಡಿಲ್ಲ. ಪಕ್ಷದಲ್ಲಿ ಹೈಕಮಾಂಡ್ ನಿರ್ಧಾರವೇ ಅಂತಿಮ ಎಂದು ಸ್ಪಷ್ಟಪಡಿಸಿದ್ದಾರೆ.

***************

ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಮತ್ತು ಪೊಲೀಸ್ ನಿರ್ದೇಶಕರಿಗೆ ನೋಟಿಸ್ ಜಾರಿ ಮಾಡಿದೆ.

ಪುತ್ರಿಗೆ ಮೆದುಳಿನಲ್ಲಿ ರಕ್ತಸ್ರಾವವಾಗಿ ಗಂಭೀರ ಸ್ಥಿತಿಯಲ್ಲಿದ್ದಾಗ ಅಂಬ್ಯುಲೆನ್ಸ್ ಚಾಲಕ, ಪೊಲೀಸರು, ಸ್ಮಶಾನ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ಲಂಚ ನೀಡಬೇಕಾಯಿತು ಎಂಬ ತಂದೆ ನೀಡಿದ ಹೇಳಿಕೆ ಹಿನ್ನೆಲೆಯಲ್ಲಿ ದೂರು ದಾಖಲಿಸಲಾಗಿದೆ.

ಮಾಧ್ಯಮ ವರದಿಯ ಆಧಾರದ ಮೇಲೆ ಆಯೋಗವು ಸ್ವಯಂ ಪ್ರೇರಿತವಾಗಿ ಪ್ರಕರಣ ದಾಖಲಿಸಿದೆ. ಎರಡು ವಾರಗಳಲ್ಲಿ ವಿವರವಾದ ವರದಿಯನ್ನು ಸಲ್ಲಿಸುವಂತೆ ಆಯೋಗ ಹೇಳಿದೆ.

***************

ಅನಾರೋಗ್ಯದಿಂದ ಬಳಲುತ್ತಿದ್ದ ಮಾಜಿ ಸಚಿವ ಶಾಸಕ ಹೆಚ್.ವೈ. ಮೇಟಿ ಇಂದು ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನ ಹೊಂದಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಹಲವು ಗಣ್ಯರು ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದಿದ್ದಾರೆ.

ಅವರ ಅಂತ್ಯಕ್ರಿಯೆ ನಾಳೆ ಹುಟ್ಟೂರಾದ ಬಾಗಲಕೋಟೆ ಜಿಲ್ಲೆಯ ತಿಮ್ಮಾಪುರದಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನಡೆಯಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ಅಂತ್ಯ ಸಂಸ್ಕಾರದಲ್ಲಿ ಪಾಲ್ಗೊಳ್ಳಲಿದ್ದಾರೆ.

***************

ಬಳ್ಳಾರಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಇದೇ 13 ರಿಂದ 19 ರವರೆಗೆ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ತಿಳಿಸಿದ್ದಾರೆ.

ಕಲ್ಯಾಣ ಕರ್ನಾಟಕ ಭಾಗದ ವ್ಯಾಪ್ತಿಯಲ್ಲಿ ಸೇನಾ ನೇಮಕಾತಿ ರ್‍ಯಾಲಿಗಾಗಿ ಬಳ್ಳಾರಿ ಜಿಲ್ಲೆಯನ್ನು ಆಯ್ಕೆ ಮಾಡಿರುವುದು ಹೆಮ್ಮೆಯ ಸಂಗತಿಯಾಗಿದೆ. ಶಿಸ್ತುಬದ್ಧವಾಗಿ ಆಯೋಜನೆ ಮಾಡುವ ಮೂಲಕ ಯಾವುದೇ ಕೊರತೆಯಾಗದಂತೆ ಯಶಸ್ವಿಗೊಳಿಸಬೇಕು ಎಂದು ವಿವಿಧ ಉಪ ಸಮಿತಿಗಳ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಕೇರಳ ಮತ್ತು ರಾಜ್ಯದ 13 ಜಿಲ್ಲೆಗಳ ಯುವ ಜನತೆ ದಿನಕ್ಕೆ 800 ಮಂದಿಯಂತೆ ಭಾಗವಹಿಸಲಿದ್ದಾರೆ. ಪೊಲೀಸ್ ಇಲಾಖೆಯಿಂದ ಸೂಕ್ತ ಬಂದೋಬಸ್ತ್ ಕಲ್ಪಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

***************

ಜನನ ಮತ್ತು ಮರಣ ಅಂಕಿ ಸಂಖ್ಯೆಗಳನ್ನು ಇ-ತಂತ್ರಾಂಶದಲ್ಲಿ ಕಡ್ಡಾಯವಾಗಿ ದಾಖಲಿಸಬೇಕೆಂದು ದಾವಣಗೆರೆ ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ಸೂಚಿಸಿದ್ದಾರೆ.

ಜಿಲ್ಲಾ ಮಟ್ಟದ ನಾಗರಿಕ ನೋಂದಣಿ ಪದ್ದತಿಯ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜನನ ಮತ್ತು ಮರಣ ಪ್ರಕರಣಗಳಲ್ಲಿ ಶೇಕಡ 100ರಷ್ಟು ಇ–ಜನ್ಮ ತಂತ್ರಾಂಶದಲ್ಲಿ ನೊಂದಣಿಯಾದರೆ, ಮರಣ ಹೊಂದಿದರೂ ಸರ್ಕಾರದ ಸೌಲಭ್ಯಗಳನ್ನು ಪಡೆಯುತ್ತಿರುವ ಮಾಹಿತಿ ಸಿಗಲಿದೆ. ಮರಣ ಹೊಂದಿದರೂ ಅನೇಕರು ಸರ್ಕಾರದ ಸೌಲಭ್ಯಗಳನ್ನು ದುರುಪಯೋಗಪಡಿಸುತ್ತಿದ್ದು, ಪರಿಶೀಲನೆ ನಡೆಸಲು ಇದು ಸಹಕಾರಿಯಾಗಲಿದೆ ಎಂದು ಹೇಳಿದ್ದಾರೆ.

***************

ಮಂಗಳಾಪುರಂನಲ್ಲಿ ನಡೆಯುತ್ತಿರುವ ಕೇರಳ ವಿರುದ್ಧದ ರಣಜಿ ಪಂದ್ಯಾವಳಿಯಲ್ಲಿ ಕರ್ನಾಟಕ ಇನ್ನಿಂಗ್ಸ್ ಹಾಗೂ 164 ರನ್‌ಗಳ ಗೆಲುವು ಸಾಧಿಸಿದೆ. ಇದರೊಂದಿಗೆ ರಣಜಿ ಋತುವಿನಲ್ಲಿ ಮೊದಲ ಗೆಲುವು ದಾಖಲಿಸಿರುವ ಮಯಾಂಕ್ ಅಗರ್ವಾಲ್ ನೇತೃತ್ವದ ಕರ್ನಾಟಕ ಎಲೈಟ್ ಬಿ–ಗುಂಪಿನಲ್ಲಿ 10 ಅಂಕಗಳೊಂದಿಗೆ ಅಗ್ರಸ್ಥಾನ ಪಡೆದಿದೆ.

ಕರುಣ್ ನಾಯರ್ ಹಾಗೂ ಸ್ಮರಣ್ ರವಿಚಂದ್ರನ್, ಅಮೋಘ ದ್ವಿಶತಕದಿಂದ ಕರ್ನಾಟಕ 586 ರನ್‌ಗಳ ಬೃಹತ್ ಗುರಿ ನೀಡಿತ್ತು.

ಕೇರಳ ಮೊದಲ ಇನ್ನಿಂಗ್ಸ್‌ನಲ್ಲಿ 238 ಹಾಗೂ 2ನೇ ಇನ್ನಿಂಗ್ಸ್‌ನಲ್ಲಿ 184 ರನ್‌ಗಳಿಸಿ ತನ್ನೆಲ್ಲ ವಿಕೆಟ್ ಕಳೆದುಕೊಂಡಿತು.

ಕರ್ನಾಟಕದ ಪರ ಮೊಹ್ಸಿನ್ ಖಾನ್ 6 ವಿಕೆಟ್ ಪಡೆದರೆ, ವಿದ್ವತ್ ಕಾವೇರಪ್ಪ 2 ವಿಕೆಟ್ ಪಡೆದಿದ್ದಾರೆ.

***************

ವಿಜಯನಗರ ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಶೇಂಗಾ ಮತ್ತು ಸೂರ್ಯಕಾಂತಿ ಉತ್ಪನ್ನ ಖರೀದಿಸುವ ಸಂಬಂಧ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಶೇಂಗಾ ಮತ್ತು ಸೂರ್ಯಕಾಂತಿ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ ಎಂದು ಜಿಲ್ಲಾ ವಿಶೇಷ ಕಾರ್ಯಪಡೆ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದ್ದಾರೆ.

***************